## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕ ಕಾಲ | ಮಧ್ಯಾಹ್ನ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ**: ಜಗಳಗಂಟ ವ್ಯಕ್ತಿಯೊಂದಿಗಿನ ನಿಮ್ಮ ವಾದ ನಿಮ್ಮ ಮೂಡ್ ಅನ್ನು ಹಾಳು ಮಾಡಬಹುದು. ಬುದ್ಧಿವಂತಿಕೆ ತೋರಿಸಿ ಮತ್ತು ಸಾಧ್ಯವಾದರೆ ವೈಷಮ್ಯಗಳನ್ನು ತಪ್ಪಿಸಿ, ಏಕೆಂದರೆ ಜಗಳಗಳು ಹಾಗೂ ವೈಷಮ್ಯಗಳು ಯಾವತ್ತೂ ನಿಮಗೆ ಸಹಾಯ ಮಾಡುವುದಿಲ್ಲ.

**ವೃಷಭ**: ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ಅನಿರೀಕ್ಷಿತ ಬಿಲ್‌ಗಳು ಹಣಕಾಸಿನ ಹೊರೆಯನ್ನು ಹೆಚ್ಚಿಸುತ್ತದೆ. ಮನೆಯ ವಾತಾವರಣವನ್ನು ಬದಲಾಯಿಸುವ ಮೊದಲು ಎಲ್ಲರ ಅನುಮೋದನೆಯಿದೆ ಎಂದು ಖಾತ್ರಿಪಡಿಸಿಕೊಳ್ಳಿ.

**ಮಿಥುನ**: ನಿಮ್ಮ ಆರೋಗ್ಯದ ಬಗ್ಗೆ ವಿಶೇಷವಾಗಿ ರಕ್ತದೊತ್ತಡ ರೋಗಿಗಳ ಬಗ್ಗೆ ಸ್ವಲ್ಪ ಜಾಗ್ರತೆಯಿಂದಿರಿ. ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು ಮತ್ತು ಈ ಯೋಜನೆ ಯಶಸ್ವಿಯಾಗಲಿದೆ ಎಂದು ಭರವಸೆ ಇದೆ.

**ಕಟಕ**: ಅತ್ಯಂತ ಪ್ರಭಾವಿ ಜನರ ಬೆಂಬಲ ನಿಮ್ಮ ನೈತಿಕಸ್ಥೈರ್ಯವನ್ನು ಹೆಚ್ಚಿಸುತ್ತದೆ. ನಿಮ್ಮ ಆರ್ಥಿಕ ಸ್ಥಿತಿ ಸುಧಾರಿಸಿದರೂ ಹಣದ ಹೊರಹರಿವು ನಿಮ್ಮ ಯೋಜನೆಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ತೊಂದರೆಯುಂಟುಮಾಡುತ್ತದೆ. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ.

**ಸಿಂಹ**: ತುಂಬಾ ಚಿಂತೆ ಮತ್ತು ಒತ್ತಡ ರಕ್ತದೊತ್ತಡವನ್ನು ಉಂಟುಮಾಡಬಹುದು. ಅನಿರೀಕ್ಷಿತ ಬಿಲ್‌ಗಳು ಹಣಕಾಸಿನ ಹೊರೆಯನ್ನು ಹೆಚ್ಚಿಸುತ್ತದೆ. ಸ್ನೇಹಿತರು ಮತ್ತು ಕುಟುಂಬದ ಸದಸ್ಯರು ನಿಮಗೆ ನೆರವು ಮತ್ತು ಪ್ರೀತಿ ಒದಗಿಸುತ್ತಾರೆ. ಇಂದು ನೀವು ಒಂದು ಹೃದಯ ಒಡೆಯುವುದನ್ನು ತಪ್ಪಿಸುತ್ತೀರಿ.

**ಕನ್ಯಾ**: ನಗು ಖಿನ್ನತೆಯ ವಿರುದ್ಧ ಕೆಲಸ ಮಾಡುತ್ತದೆ. ನೀವು ತ್ವರಿತ ಹಣ ಪಡೆಯುವ ಬಯಕೆ ಹೊಂದಿರುತ್ತೀರಿ. ಮನೆಯ ವಿಷಯಗಳು ಮತ್ತು ಬಾಕಿಯಿರುವ ಗೃಹಕೃತ್ಯಗಳನ್ನು ಪೂರೈಸಲು ಒಂದು ಅನುಕೂಲಕರ ದಿನ. ಪ್ರಣಯ ರೋಮಾಂಚ ಕಾರಿಯಾಗಿರುತ್ತದೆ ಆದ್ದರಿಂದ ಪ್ರೀತಿಸುವವರನ್ನು ಸಂಪರ್ಕಿಸಿ.

**ತುಲಾ**: ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಕಿರಿಯ ಸಹೋದರ ಸಹೋದರಿ ನಿಮ್ಮ ಸಲಹೆ ಪಡೆಯಸಬಹುದು. ಪ್ರೀತಿಪಾತ್ರರೊಡನೆ ನಿಮ್ಮ ವೈಯಕ್ತಿಕ ಭಾವನೆಗಳು ರಹಸ್ಯಗಳನ್ನು ಹಂಚಿಕೊಳ್ಳಲು ಇದು ಸರಿಯಾದ ಸಮಯವಲ್ಲ. ಸಾಮರ್ಥ್ಯವನ್ನು ಹೆಚ್ಚಿಸಲು ಹೊಸ ತಂತ್ರಗಳಿಗೆ ಹೊಂದಿಕೊಳ್ಳಿ.

**ವೃಶ್ಚಿಕ**: ನಿಮ್ಮ ಹಠಾತ್ ಮತ್ತು ಹಠಮಾರಿ ಪ್ರವೃತ್ತಿಯನ್ನು ವಿಶೇಷವಾಗಿ ಪಾರ್ಟಿಗಳಲ್ಲಿ ನಿಯಂತ್ರಿಸಲು ಪ್ರಯತ್ನಿಸಿ ಏಕೆಂದರೆ ಇದು ಪಕ್ಷದ ಮೂಡ್ ಹಾಳು ಮಾಡಬಹುದು. ಇಂದು ನಿಮಗೆ ಅನೇಕ ಹೊಸ ಆರ್ಥಿಕ ಯೋಜನೆಗಳು ದೊರಕುತ್ತವೆ ಯಾವುದೇ ಬದ್ಧತೆಗೊಳಗಾಗುವ ಮುನ್ನ ಸಾಧಕ ಬಾಧಕಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಿ.

**ಧನಸ್ಸು**: ಇಂದಿನ ದಿನ ಯಾರಿಗೂ ಸಾಲ ನೀಡಬೇಡಿ ಮತ್ತು ಕೊಡುವುದು ಅಗತ್ಯವಾಗಿದ್ದರೆ ಕೊಡುವವರಿಂದ ಅವರು ಯಾವಾಗ ಹಣವನ್ನು ಮರುಪಾವತಿ ಮಾಡುತ್ತಾರೆಂದು ಬರವಣಿಗೆಯಲ್ಲಿ ತೆಗೆದುಕೊಳ್ಳಿ ಸ್ನೇಹಿತರು ನಿಮ್ಮ ವೈಯಕ್ತಿಕ ಜೀವನದ ಬಗ್ಗೆ ನಿಮಗೆ ಉತ್ತಮ ಸಲಹೆ ನೀಡುತ್ತಾರೆ.

**ಮಕರ**: ನಿಮ್ಮ ಸಾಮಾಜಿಕ ಜೀವನವನ್ನು ನಿರ್ಲಕ್ಷಿಸಬೇಡಿ. ನಿಮ್ಮ ಬಿಡುವಿರದ ಕೆಲಸದಿಂದ ಸ್ವಲ್ಪ ಸಮಯ ತೆಗೆದುಕೊಳ್ಳಿ ಹಾಗೂ ನಿಮ್ಮ ಕುಟುಂಬದೊಂದಿಗೆ ಯಾವುದಾದರೂ ಪಾರ್ಟಿಗೆ ಹೋಗಿ. ಇದು ನಿಮ್ಮ ಒತ್ತಡ ನಿವಾರಿಸುವುದಲ್ಲದೇ ಆದರೆ ನಿಮ್ಮ ಹಿಂಜರಿಕೆಯನ್ನೂ ತೆಗೆದುಹಾಕುತ್ತದೆ.

**ಕುಂಭ**: ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ಇಂದು ನೀವು ಭೂಮಿ, ವಸತಿ, ಸಾಂಸ್ಕೃತಿಕ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗಮನ ನೀಡಬೇಕು. ನೀವು ಪ್ರೀತಿಸುವ ಕಾಳಜಿ ತೋರಿಸುವ ಜನರೊಂದಿಗೆ ಸಕಾರಣವಾಗಿರಲು ಪ್ರಯತ್ನಿಸಿ.

**ಮೀನ**: ನಿಮ್ಮ ಸಂಗಾತಿಯ ನಿಷ್ಠಾವಂತ ಹೃದಯ ಮತ್ತು ಅದ್ಭುತ ಚೈತನ್ಯ ನಿಮಗೆ ಸಂತೋಷ ನೀಡಬಹುದು. ಆವತ್ತಿಗಾಗಿ ಮಾತ್ರ ಬದುಕುವ ಮತ್ತು ಮನೋರಂಜನೆಗಾಗಿ ಹೆಚ್ಚು ಸಮಯ ಮತ್ತು ಹಣ ಖರ್ಚು ಮಾಡುವ ನಿಮ್ಮ ಪ್ರವೃತ್ತಿಯನ್ನು ನಿಯಂತ್ರಿಸಿ. ಸಂಜೆ ಸ್ನೇಹಿತರೊಡನೆ ಹೋಗಿ, ಇದು ತುಂಬ ಒಳ್ಳೆಯದನ್ನು ಮಾಡುತ್ತದೆ.

# ಇಸ್ಲಾಂ ಧರ್ಮದ ಕುರಿತು ವಿವಾದಕ್ಕೆ ಹೆದರಿ ಉಲ್ಟಾ ಹೊಡೆದ ಸಚಿವ ಬಸವರಾಜ ರಾಯರೆಡ್ಡಿ!

• **ಉದಯವಾಹಿನಿ ಕೊಪ್ಪಳ :**

ಇಸ್ಲಾಂ ಧರ್ಮದ ಕುರಿತು ತಾವು ನೀಡಿದ್ದ ಹೇಳಿಕೆ ವಿವಾದಕ್ಕೆ ಕಾರಣವಾದ ಬೆನ್ನಲ್ಲೇ ಸಚಿವ ಬಸವರಾಜ ರಾಯರೆಡ್ಡಿ ಸ್ಪಷ್ಟನೆ ನೀಡಿದ್ದಾರೆ. ಯಲಬುರ್ಗಾ ಪಟ್ಟಣದಲ್ಲಿ ಮಾತನಾಡಿದ ಅವರು, ತಾವು ಯಾವುದೇ ಧರ್ಮವನ್ನು ಕಡಿಮೆ ಎಂದು ಹೇಳಿಲ್ಲ. ಎಲ್ಲಾ ಧರ್ಮಗಳಲ್ಲಿರುವ ಉತ್ತಮ ವಿಚಾರಗಳನ್ನು ಗೌರವಿಸುವುದಾಗಿ ಹೇಳಿದ್ದಾರೆ. ಮಾತನಾಡುವ ವೇಳೆ ಇಸ್ಲಾಂ ಧರ್ಮದಲ್ಲಿರುವ ಕೆಲವು ಉತ್ತಮ ವಿಚಾರಗಳ ಬಗ್ಗೆ ಹೇಳಿದ್ದಾಗಿ ರಾಯರೆಡ್ಡಿ ತಿಳಿಸಿದ್ದಾರೆ. ಎಲ್ಲಾ ಧರ್ಮಗಳೂ ಶ್ರೇಷ್ಠ ಎಂದು ನಾನು ಹೇಳಿದ್ದೇನೆ. ಇಸ್ಲಾಂ ಧರ್ಮದಲ್ಲೂ ಶ್ರೇಷ್ಠ ವಿಚಾರಗಳಿವೆ ಎಂದು ಹೇಳಿದ್ದೇನೆ. ಬೇರೆ ಧರ್ಮಗಳು ಕಡಿಮೆ ಎಂದು ಹೇಳಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.


ಉದಯವಾಹಿನಿ ಚಿತ್ರ

ಯಾವುದೇ ನಿರ್ದಿಷ್ಟ ಧರ್ಮದ ಅನುಯಾಯಿ ಅಲ್ಲ ಎಂದಿರುವ ರಾಯರೆಡ್ಡಿ, ಇಸ್ಲಾಂ, ಕ್ರೈಸ್ತ ಮತ್ತು ಯಹೂದಿ ಧರ್ಮಗಳ ಕುರಿತು ಅಧ್ಯಯನ ಮಾಡುವುದಾಗಿ ಹೇಳಿದ್ದಾರೆ. ವಿವಿಧ ಧರ್ಮಗಳ ಧಾರ್ಮಿಕ ಸ್ಥಳಗಳಿಗೆ ಭೇಟಿ ನೀಡಿರುವುದಾಗಿಯೂ ತಿಳಿಸಿದ್ದು, ಹಜ್ ಯಾತ್ರೆಗೆ ತೆರಳುವ ಆಸೆ ವ್ಯಕ್ತಪಡಿಸಿದ್ದರೂ ಸದ್ಯ ಅದು ಸಾಧ್ಯವಾಗುತ್ತಿಲ್ಲ ಎಂದು ಹೇಳಿದ್ದಾರೆ. ವಿವಾದದ ನಡುವೆ ಬಸವಣ್ಣನ ವಚನವನ್ನು ಉಲ್ಲೇಖಿಸಿದ ರಾಯರೆಡ್ಡಿ, ''ಕಳಬೇಡ, ಕೊಲಬೇಡ, ಹುಸಿಯ ನುಡಿಯಲು ಬೇಡ'' ಎಂಬ ಶರಣ ತತ್ವವನ್ನು ಪ್ರಸ್ತಾಪಿಸಿದರು. ಮನುಷ್ಯತ್ವ ಮತ್ತು ಉತ್ತಮ ವಿಚಾರಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಮುಖ್ಯ ಎಂಬ ನಿಲುವನ್ನು ಅವರು ವ್ಯಕ್ತಪಡಿಸಿದರು. ತಾವು ಮಠ-ಮಾನ್ಯಗಳಿಗೆ ನಿಯಮಿತವಾಗಿ ಹೋಗುವುದಿಲ್ಲ. ಆದರೆ ತಮ್ಮೊಂದಿಗೆ ಇರುವವರು ಅಥವಾ ಕುಟುಂಬದವರು ಆಹ್ವಾನಿಸಿದಾಗ ಅವರ ಒತ್ತಾಯದ ಮೇರೆಗೆ ಹೋಗುವುದಾಗಿ ಹೇಳಿದ್ದಾರೆ.

# ಅರಣ್ಯ ಸಂಪತ್ತು ಉಳಿಸಿ, ಬೆಳೆಸಿ: ಸಚಿವ ರಾಮಲಿಂಗಾರೆಡ್ಡಿ

## ಈಗಾಗಲೇ ಕ್ಷೇತ್ರದ 19 ಕೆರೆಗಳನ್ನು ತುಂಬಿಸಿರುವುದರಿಂದ ಅಂತರ್ಜಲ ಮಟ್ಟ ಹೆಚ್ಚಾಗಿ ರೈತರಿಗೆ ಅನುಕೂಲವಾಗಿದೆ ಎಂದು ಹೇಳಿದರು

• **ಉದಯವಾಹಿನಿ ವಿಜಯಪುರ, :**

ಪ್ರಕೃತಿಯೇ ಜಗತ್ತಿನ ಜೀವನಾಡಿಯಾಗಿದ್ದು, ಅರಣ್ಯ ಸಂಪತ್ತನ್ನು ಸಂರಕ್ಷಿಸಿ, ಬೆಳೆಸುವುದು ಪ್ರತಿಯೊಬ್ಬರ ಕರ್ತವ್ಯವಾಗಬೇಕು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ರಾಮಲಿಂಗಾರೆಡ್ಡಿ ಹೇಳಿದರು. ಇಂಡಿ ತಾಲ್ಲೂಕಿನ ಸಾವಳಸಂಗದಲ್ಲಿ ಸಾಮಾಜಿಕ ಅರಣ್ಯ ವಿಭಾಗ ಹಾಗೂ ಇಂಡಿ ಸಾಮಾಜಿಕ ಅರಣ್ಯ ವಲಯದ ಸಹಯೋಗದಲ್ಲಿ 2.50 ಕೋಟಿ ವೆಚ್ಚದಲ್ಲಿ ನಿರ್ಮಿಸಿರುವ ಜ್ಞಾನಯೋಗಿ ಶ್ರೀ

**1 : ಯೋಜನೆ ರೈತರಿಗೆ ಅನುಕೂಲ**
**2 : 'ಭೀಮಾ ಸಿರಿ' ಮಾಡುವ ಗುರಿ**
**3 : ಜ್ಞಾನ ಪರಿಸರ ಪ್ರೀತಿಯ ಸಂದೇಶ**

ಸಿದ್ದೇಶ್ವರ ಸ್ವಾಮೀಜಿ ವೃಕ್ಷೋದ್ಯಾನವನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಸಾವಳಸಂಗದಲ್ಲಿ ಹಸಿರೀಕರಣಕ್ಕೆ ಆದ್ಯತೆ ನೀಡಿ ಸುಂದರವಾಗಿ ವೃಕ್ಷೋದ್ಯಾನ ನಿರ್ಮಿಸಿರುವ ಅರಣ್ಯ ಇಲಾಖೆಯ ಕಾರ್ಯವನ್ನು ಶ್ಲಾಘಿಸಿದ ಸಚಿವರು, ಮುಂದಿನ ದಿನಗಳಲ್ಲಿ ಇಂಡಿ ನಗರದಲ್ಲಿ ಟ್ರೀ ಪಾರ್ಕ್ ಹಾಗೂ ಕೃಷ್ಣಮೃಗ ಮೀಸಲು ಪ್ರದೇಶ ಅಭಿವೃದ್ಧಿಪಡಿಸಲು ಅರಣ್ಯ ಇಲಾಖೆಯಿಂದ ಅಗತ್ಯ ಸಹಕಾರ ನೀಡಲಾಗುವುದು ಎಂದು ಭರವಸೆ ನೀಡಿದರು.

ನಡೆದಾಡುವ ದೇವರು ಎಂದೇ ಖ್ಯಾತರಾದ ಜ್ಞಾನಯೋಗಿ ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರ ಹೆಸರನ್ನು ವೃಕ್ಷೋದ್ಯಾನಕ್ಕೆ


ಉದಯವಾಹಿನಿ ಚಿತ್ರ

ಇಟ್ಟಿರುವುದು ಅರ್ಥಪೂರ್ಣವಾಗಿದೆ. ಸರಳತೆ, ಜ್ಞಾನ ಹಾಗೂ ಪರಿಸರ ಪ್ರೀತಿಯ ಸಂದೇಶ ಸಾರಿದ ಸಿದ್ದೇಶ್ವರ ಶ್ರೀಗಳ ಆಶಯಕ್ಕೆ ಈ ವೃಕ್ಷೋದ್ಯಾನ ಪೂರಕವಾಗಿದೆ. ಸಾರ್ವಜನಿಕರು ಇಲ್ಲಿಗೆ ಭೇಟಿ ನೀಡುವ ಸಂದರ್ಭದಲ್ಲಿ ಸಸಿ ನೆಟ್ಟು, ಈ ತಾಣವನ್ನು ತಮ್ಮ ಸ್ವಂತ ಆಸ್ತಿಯಂತೆ ಭಾವಿಸಿ ಸಂರಕ್ಷಿಸಬೇಕು ಎಂದು ಕರೆ ನೀಡಿದರು. ಅರಣ್ಯ ಇಲಾಖೆಯ ಸತತ ಪರಿಶ್ರಮದ ಜತೆಗೆ ತಮ್ಮಿಂದ ನೀಡಲಾದ 90 ಲಕ್ಷ ಅನುದಾನ ಸೇರಿದಂತೆ ವಿವಿಧ ಮೂಲಗಳ ಸಹಕಾರದಿಂದ ವೃಕ್ಷೋದ್ಯಾನ ನಿರ್ಮಾಣಗೊಂಡಿದೆ. ಜಿಲ್ಲೆಯ ಅರಣ್ಯ ಪ್ರದೇಶವನ್ನು ಹೆಚ್ಚಿಸಲು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸಸಿ ನೆಟ್ಟು ಹಸಿರೀಕರಣಕ್ಕೆ ಕೈಜೋಡಿಸಬೇಕು ಎಂದರು. ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ ಅಧ್ಯಕ್ಷತೆ

> **ಇಂಡಿಯ ಲಿಂಬೆಗೆ ಜಿಐ ಟ್ಯಾಗ್ ದೊರೆತಿರುವುದರಿಂದ ಇಂದು ವಿಶ್ವಮಟ್ಟದಲ್ಲಿ ಗುರುತಿಸಿಕೊಂಡಿದೆ. ಲಿಂಬೆ ಅಭಿವೃದ್ಧಿ ಮಂಡಳಿ ಸ್ಥಾಪನೆಗೂ ಶ್ರಮಿಸಲಾಗಿದ್ದು, ಭೀಮಾ ತೀರವನ್ನು 'ಭೀಮಾ ಸಿರಿ'ಯಾಗಿ ರೂಪಿಸುವ ನಿಟ್ಟಿನಲ್ಲಿ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ. ಈ ಕಾರ್ಯಕ್ಕೆ ಸರ್ಕಾರದ ಜತೆಗೆ ಸಾರ್ವಜನಿಕರ ಸಹಭಾಗಿತ್ವವೂ ಅಗತ್ಯ ಎಂದು ಹೇಳಿದರು. -ಯಶವಂತರಾಯಗೌಡ ಪಾಟೀಲ**

ವಹಿಸಿ ಮಾತನಾಡಿ, ನಿಸರ್ಗ ಪ್ರಿಯರಾಗಿದ್ದ ಜ್ಞಾನಯೋಗಿ ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರ ತತ್ವಗಳು ಮುಂದಿನ ಪೀಳಿಗೆಗೆ ಸರಳತೆ, ಸ್ವಚ್ಛತೆ ಹಾಗೂ ನಿಷ್ಠೆಯ ಮಾರ್ಗದರ್ಶನ ನೀಡಲಿವೆ ಎಂದರು.

> **ಕ್ಷೇತ್ರದ ಸಮಗ್ರ ಅಭಿವೃದ್ಧಿ ಹಾಗೂ ರೈತರ ಸಂಕಷ್ಟಗಳಿಗೆ ಸ್ಪಂದಿಸಲು ಬದ್ಧವಾಗಿದ್ದು, ಮುಖ್ಯಮಂತ್ರಿ ಅವರೂ ಇಂಡಿ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಭರವಸೆ ನೀಡಿದ್ದಾರೆ ಎಂದರು.**
> **ಜ್ಞಾನಯೋಗಾಶ್ರಮದ ಅಧ್ಯಕ್ಷ ಬಸವಲಿಂಗ ಮಹಾಸ್ವಾಮಿಗಳು ಹಾಗೂ ಅಮೃತಾನಂದ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.**

ಆಲಮಟ್ಟಿ ಜಲಾಶಯ ನಿರ್ಮಾಣಕ್ಕಾಗಿ ಭೂಮಿ ತ್ಯಾಗ ಮಾಡಿದವರ ಕೊಡುಗೆಯನ್ನು ಸ್ಮರಿಸಿದ ಅವರು, ಬರದಿಂದ ತತ್ತರಿಸಿದ್ದ ಇಂಡಿ ಕ್ಷೇತ್ರದಲ್ಲಿ ನೀರಿನ ಸಮಸ್ಯೆ ನಿವಾರಣೆಗೆ ಹಲವು ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈಗಾಗಲೇ ಕ್ಷೇತ್ರದ 19 ಕೆರೆಗಳನ್ನು ತುಂಬಿಸಿರುವುದರಿಂದ ಅಂತರ್ಜಲ ಮಟ್ಟ ಹೆಚ್ಚಾಗಿ ರೈತರಿಗೆ ಅನುಕೂಲವಾಗಿದೆ ಎಂದು ಹೇಳಿದರು. ಮಳೆ ಕೊರತೆಯಿಂದ ಬೆಳೆ ಕಳೆದುಕೊಂಡಿರುವ ರೈತರ ಹಿತದೃಷ್ಟಿಯಿಂದ ಇಂಡಿ ತಾಲ್ಲೂಕನ್ನು ಬರಪೀಡಿತ ಎಂದು ಘೋಷಿಸುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿದೆ. ಸಂಕಷ್ಟದಲ್ಲಿರುವ ರೈತರಿಗೆ ಶೀಘ್ರ ಪರಿಹಾರ ದೊರಕಿಸಲು ಪ್ರಾಮಾಣಿಕ ಪ್ರಯತ್ನ ನಡೆಸಲಾಗುವುದು. ಇಂಡಿ ಭಾಗದ ಕುಡಿಯುವ ನೀರಿನ ಸಮಸ್ಯೆಗೂ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗಿದೆ ಎಂದರು. ಕಾರ್ಯಕ್ರಮದಲ್ಲಿ ಅಮೋಘ ಸಿದ್ದೇಶ್ವರ ಸ್ವಾಮೀಜಿ, ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಶ್ರೀ ಮೂಲ ನಂದೀಶ್ವರ ಜಾತ್ರಾ ಮಹೋತ್ಸವ

• **ಉದಯವಾಹಿನಿ, ಬಸವನಬಾಗೇವಾಡಿ,**

ಇಲ್ಲಿನ ಶ್ರೀ ಬಸವೇಶ್ವರ (ಮೂಲ ನಂದೀಶ್ವರ) ಜಾತ್ರಾ ಮಹೋತ್ಸವದ ಪ್ರಮುಖ ಆಕರ್ಷಣೆಯಾದ ಪಲ್ಲಕ್ಕಿ ಉತ್ಸವವು ಸಾವಿರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ಅದ್ದೂರಿಯಾಗಿ ಜರುಗಿತು.

ದೇವಸ್ಥಾನದಲ್ಲಿ ಶ್ರೀ ಮೂಲ ನಂದೀಶ್ವರ ಮೂರ್ತಿಗೆ ಮಹಾಭಿಷೇಕ, ವಿಶೇಷ ಅಲಂಕಾರ ಮಾಡಲಾಯಿತು. ಬಳಿಕ ಹೂವಿನಿಂದ ಸಿಂಗರಿಸಿದ ಪಲ್ಲಕ್ಕಿಯಲ್ಲಿ ಉತ್ಸವ ಮೂರ್ತಿಯನ್ನು ಪ್ರತಿಷ್ಠಾಪಿಸಲಾಯಿತು. ತಮಟೆ, ನಗಾರಿ, ಡೊಳ್ಳು ಕುಣಿತ, ನಂದಿಕೋಲು, ಕಹಳೆ ವಾದ್ಯಗಳೊಂದಿಗೆ ಪಲ್ಲಕ್ಕಿ ಮೆರವಣಿಗೆಗೆ ಚಾಲನೆ ನೀಡಲಾಯಿತು. ದೇವಸ್ಥಾನದಿಂದ ಹೊರಟ ಪಲ್ಲಕ್ಕಿ ಉತ್ಸವವು ಬಸವೇಶ್ವರ ವೃತ್ತದ ಮೂಲಕ ಸಾಗಿ ಪುರಾಣ ಪ್ರಸಿದ್ಧ ಹೋರಿಮಟ್ಟಿ ಗುಡ್ಡಕ್ಕೆ ತೆರಳಿತು.

ವಿರಕ್ತ ಮಠಕ್ಕೆ ತೆರಳುವ ಸಂದರ್ಭದಲ್ಲಿ ಮಾರ್ಗದುದ್ದಕ್ಕೂ ಭಕ್ತರು ಪಲ್ಲಕ್ಕಿ ಮೇಲೆ ಹೂವು, ಕುಂಕುಮ ಎರಚಿ ಭಕ್ತಿ ಸಮರ್ಪಿಸಿದರು. ಮಹಿಳೆಯರು ಮನೆ ಮುಂದೆ ರಂಗೋಲಿ ಹಾಕಿ, ದೀಪ-ಧೂಪಗಳಿಂದ ಆರತಿ ಬೆಳಗಿದರು. ಹರ ಹರ ಮಹಾದೇವ, ಜೈ ಬಸವ ಎಂಬ


ಉದಯವಾಹಿನಿ ಚಿತ್ರ

ಜಯಘೋಷಗಳು ಮುಗಿಲು ಮುಟ್ಟಿದ್ದವು. ಪಲ್ಲಕ್ಕಿ ಉತ್ಸವದ ಹಿನ್ನೆಲೆಯಲ್ಲಿ ಪಟ್ಟಣದ ಪ್ರಮುಖ ವೃತ್ತಗಳಲ್ಲಿ ಮಾಡಲಾಗಿದ್ದ ವಿದ್ಯುತ್ ದೀಪಾಲಂಕಾರವು ಜನರ ಗಮನ ಸೆಳೆಯಿತು. ಪಲ್ಲಕ್ಕಿ ಉತ್ಸವದಲ್ಲಿ ವಿಜಯನಗರದ ಸಮಾಳ ವಾದನ, ಭಟ್ಕಳದ ಜೈ ಮಾರುತಿ ಕಲಾ ಸಮಿತಿಯಿಂದ ವಾದನ, ಹಲಗೆ, ಡೊಳ್ಳು ವಾದ್ಯದೊಂದಿಗೆ ಆನೆ ಅಂಬಾರಿ ಭವ್ಯ ಮೆರವಣಿಗೆ ಪಟಾಕ್ಷಿ ಸಿಡಿಸುವಿಕೆ ಉತ್ಸವಕ್ಕೆ ಮತ್ತಷ್ಟು ಮೆರುಗು ತಂದಿತು.

ಈರಣ್ಣಪಟ್ಟಣಶೆಟ್ಟಿ, ಶ್ರೀಕಾಂತ ಕೊಟ್ರಶೆಟ್ಟಿ, ಚಂದ್ರಶೇಖರಗೌಡ ಎಸ್ ಪಾಟೀಲ, ಸುರೇಶ ಹಾರಿವಾಳ, ಮೈಬೂಬ್ ನಾಯ್ಕೋಡಿ ಶೇಖರ್ ಗೊಳಸಂಗಿ, ಅಶೋಕ ಹಾರಿವಾಳ ಸೇರಿದಂತೆ ಅಪಾರ ಸಂಖ್ಯೆಯಲ್ಲಿ ಭಕ್ತರು ಸೇರಿದ್ದರು.

# 700 ಕೋಟಿ ರೂ. ಕಾರ್ಪಸ್ ನಿಧಿ ಮರಳಿ ಪಡೆದ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ

• **ಉದಯವಾಹಿನಿ, ಬೆಳಗಾವಿ:**

ಕಳೆದ 14 ವರ್ಷಗಳ ಸುದೀರ್ಘ ಹೋರಾಟದ ನಂತರ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ತನಗೆ ಸೇರಿದ್ದ 700 ಕೋಟಿ ರೂ. ಅಧಿಕ ಕಾರ್ಪಸ್ ನಿಧಿಯನ್ನು ಆದಾಯ ತೆರಿಗೆ ಇಲಾಖೆಯಿಂದ ಮರಳಿ ಪಡೆಯುವಲ್ಲಿ ಯಶಸ್ವಿಯಾಗಿದೆ. ಆದಾಯ ತೆರಿಗೆ ಪಾವತಿಸುವಂತೆ ಕಳೆದ 2013 ರಲ್ಲಿ ವಿಟಿಯುಗೆ ನೋಟಿಸ್ ನೀಡಿದ್ದ ಐಟಿ ಇಲಾಖೆ ಕೆಲವು ಬ್ಯಾಂಕ್ ಖಾತೆಗಳನ್ನು ಮುಟ್ಟುಗೋಲು ಹಾಕಿಕೊಂಡಿತ್ತು.

ಇದರಿಂದ ಆರ್ಥಿಕವಾಗಿ ಸಂಕಷ್ಟಕ್ಕೆ ಸಿಲುಕಿದ್ದ ವಿಶ್ವವಿದ್ಯಾಲಯ ನಿರಂತರ ಕಾನೂನು ಹೋರಾಟ ಮಾಡಿದ್ದಲ್ಲದೆ ಕೊನೆಗೂ ನ್ಯಾಯ ದೊರಕಿಸಿಕೊಳ್ಳುವಲ್ಲಿ ಯಶಸ್ವಿಯಾಗಿದೆ. ಸುದೀರ್ಘ ಕಾನೂನು ಹೋರಾಟದ ನಂತರ 700 ಕೋಟಿ ರೂ. ಮೊತ್ತದ ಹಣ ಪಡೆಯುವಲ್ಲಿ ಯಶಸ್ವಿಯಾಗಿರುವ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಸದ್ಯ ಈ ಹಣವನ್ನು ವಿವಿಯ ಸಿಬ್ಬಂದಿ ವೇತನಕ್ಕೆ ಬಳಕೆ ಮಾಡಲು ನಿರ್ಧರಿಸಿದೆ. 10 ವರ್ಷಗಳ ಅವಧಿಗೆ ರಾಷ್ಟ್ರೀಕೃತ ಬ್ಯಾಂಕ್ ನಲ್ಲಿ ಠೇವಣಿ ಇಡುವ ನಿರ್ಧಾರದ ಜೊತೆಗೆ 11ನೇ ವರ್ಷದಿಂದ ಠೇವಣಿಯಿಂದ




ಉದಯವಾಹಿನಿ ಚಿತ್ರ

ದೊರೆಯುವ ಬಡ್ಡಿ ಆದಾಯವನ್ನು ಸಿಬ್ಬಂದಿಯ ವೇತನ ಪಾವತಿಗೆ ಬಳಸಲು ವಿಶ್ವವಿದ್ಯಾಲಯ ಯೋಜಿಸಿದೆ.

ಕೆಲವು ತಿಂಗಳ ಹಿಂದೆ ಕುಲಪತಿ ವಿದ್ಯಾಶಂಕರ್ ಅವರು ವಿಶ್ವವಿದ್ಯಾಲಯದ ಅಧಿಕಾರಿಗಳ ಸಭೆ ಕರೆದು, ಆದಾಯ ತೆರಿಗೆ ಇಲಾಖೆಗೆ ಸಂಬಂಧಿಸಿದ ಎಲ್ಲಾ ಕಡತಗಳನ್ನು ಪರಿಶೀಲಿಸುವಂತೆ ಸೂಚಿಸಿದರು. ಜೊತೆಗೆ ನಿರಂತರ ಕಾನೂನು ಹೋರಾಟದ ಫಲವಾಗಿ 700 ಕೋಟಿ ರೂ. ಕಾರ್ಪಸ್ ನಿಧಿ ಮರಳಿ ಪಡೆಯುವಲ್ಲಿ ಯಶಸ್ವಿಯಾಗಿದೆ.

# ರಾಘವೇಂದ್ರ ಸ್ವಾಮಿಗಳ ಮಧ್ಯಾರಾಧನೆ ಪ್ರಯುಕ್ತ ಪುಷ್ಪಾರ್ಚನೆ

• **ಉದಯವಾಹಿನಿ, ಕಲಬುರಗಿ,:**


ಉದಯವಾಹಿನಿ ಚಿತ್ರ

ಇಲ್ಲಿನ ಪ್ರಶಾಂತ ನಗರದ ಶ್ರೀ ಹನುಮಾನ ಮಂದಿರದಲ್ಲಿ ಶ್ರೀ ರಾಘವೇಂದ್ರ ಸ್ವಾಮಿಗಳ ಮಧ್ಯಾರಾಧನೆ ಮಹೋತ್ಸವ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ವೈಭವದಿಂದ ಆಚರಿಸಲಾಯಿತು.

ಬೆಳಿಗ್ಗೆ ರಾಯರ ಅಷ್ಟೋತ್ತರ, ಪಾರಾಯಣ, ವಿಶೇಷ ಪಂಚಾಮೃತ ಅಭಿಷೇಕ, ಅಲಂಕಾರ, ನಂತರ ಪಂ ಶ್ರೀನಿವಾಚಾರ್ಯ ಪದಕಿ ಅವರಿಂದ ಪ್ರವಚನ, ಅನಂತ ಚಿಂಚನಸೂರ್ ಅವರ ತಂಡದವರಿಂದ ಭರತನಾಟ್ಯ ನೆರವೇರಿತು. ನಂತರ ಶ್ರೀ ರಾಘವೇಂದ್ರ ಸ್ವಾಮಿಗಳಿಗೆ ವಿಶೇಷ ಪುಷ್ಪಾರ್ಚನೆ ನೆರವೇರಿತು. ಹಸ್ತೋದಕ ಮಹಾ ಮಂಗಳಾರತಿ, ನಂತರ ಬಂದ ಭಕ್ತರಿಗೆ ತೀರ್ಥ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು. ಅರ್ಚಕರಾದ ಗುಂಡಾಚಾರ್ಯ ನರಿಬೋಳ, ನರಸಿಂಹ ಅಗ್ನಿಹೋತ್ರಿ, ಪ್ರಮೋದ ಪಂತ, ಗುರುರಾಜ ಬಂಕುರ, ವಿಜಯಕುಮಾರ ದೇವನಳ್ಳಿ, ಶಾಮರಾವ ಕುಲಕರ್ಣಿ, ಶ್ರೀನಿವಾಸ ನೆಲೋಗಿ, ಗೋಪಾಲರಾವ ಸೇರಿದಂತೆ ಅನೇಕ ಭಕ್ತರು ಭಾಗವಹಿಸಿದ್ದರು.

# ಇಂದು ಹಜರತ್ ಜಚ್ಚಾ ಮಾಸಾಬಿ ದರ್ಗಾದಲ್ಲಿ ಸರ್ವಧರ್ಮ ಸಮ್ಮೇಳ

• **ಉದಯವಾಹಿನಿ, ಕೆಂಭಾವಿ:**


ಉದಯವಾಹಿನಿ ಚಿತ್ರ

ಸ್ಥಳೀಯ ಗ್ರಾಮ ದೇವತೆಯಾದ ಮಹಾಸತಿ ಮಹಾಸತ್ಯಮ್ಮಳಾದ ಹಜರತ್ ಜಚ್ಚಾ ಮಾಸಾಬಿ ದರ್ಗಾದ ಜಾತ್ರಾ ಮಹೋತ್ಸವದ ಅಂಗವಾಗಿ ದಿನಾಂಕ 01-09-2026ರ ಮಂಗಳವಾರ ಮಧ್ಯಾಹ್ನ 2:00 ಗಂಟೆಗೆ ದರ್ಗಾ ಆವರಣದಲ್ಲಿ 'ಸರ್ವಧರ್ಮ ಸಮ್ಮೇಳನ' ಹಾಗೂ 'ಖಾಸಗಿ ಶಾಲಾ ಶಿಕ್ಷಕರ ಸನ್ಮಾನ' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ದರ್ಗಾದ ಸಜ್ಜಾದ ನಶೀನರಾದ ಷಾ ಮಹಿಬೂಬ ಪಾಶಾ ಖಾಜಿ ಫಾರೂಖಿ ಅವರು, ಸಮ್ಮೇಳನಕ್ಕೆ ಕರ್ನಾಟಕ ರಕ್ಷಣಾ ವೇದಿಕೆಯ ಅಧ್ಯಕ್ಷರಾದ ಶರಣು ಗದ್ದುಗೆ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದು ತಿಳಿಸಿದ್ದಾರೆ.

**ಖಾಸಗಿ ಶಾಲಾ ಶಿಕ್ಷಕರಿಗೆ ಸನ್ಮಾನ:**

ಕೆಂಭಾವಿಯ ವಿವಿಧ ಖಾಸಗಿ ಶಾಲೆಗಳಲ್ಲಿ ಸೇವೆಯನ್ನು ಸಲ್ಲಿಸುತ್ತಿರುವ ಶಿಕ್ಷಕರ ಸೇವೆಯನ್ನು ಗುರುತಿಸಿ, ಈ ವೇದಿಕೆಯಲ್ಲಿ ಅವರನ್ನು ಗೌರವಿಸಿ ಸನ್ಮಾನಿಸಲಾಗುವುದು. ಆದ್ದರಿಂದ ಕೆಂಭಾವಿ ವ್ಯಾಪ್ತಿಯ ಖಾಸಗಿ ಶಾಲಾ ಆಡಳಿತ ಮಂಡಳಿಯವರು, ಶಿಕ್ಷಕ ವೃಂದದವರು ಹಾಗೂ ಊರಿನ ಹಿರಿಯರು, ಪ್ರಮುಖರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿಕೊಡಬೇಕಾಗಿ ಅವರು ಪ್ರಕಟಣೆಯಲ್ಲಿ ವಿನಂತಿಸಿಕೊಂಡಿದ್ದಾರೆ.

# ಜೂಜಾಟ:ಐವರ ಬಂಧನ

• **ಉದಯವಾಹಿನಿ, ಕಲಬುರಗಿ,**

ನಗರದ ಗಂಜ್ ಏರಿಯಾದ ಹನುಮಾನ ಗುಡಿ ಪಕ್ಕದ ಖುಲ್ಲಾ ಜಾಗದಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಚೌಕ್ ಪೊಲೀಸ್ ಠಾಣೆ ಎಎಸ್ಐ ರಮೇಶ ಗುತ್ತೇದಾರ, ಸಿಬ್ಬಂದಿಗಳಾದ ಶಿವಾನಂದ, ಸುರೇಶ, ಶಿವಶರಣ ಅವರು ದಾಳಿ ನಡೆಸಿ ಐವರು ಜೂಜುಕೋರರನ್ನು ಬಂಧಿಸಿದ್ದಾರೆ.

ಮಲ್ಲಿಕಾರ್ಜುನ ಪರಸ್ಥಿ, ಜಗನಸಿಂಗ್ ರಜಪೂತ, ಅಶೋಕ ಬಿರಾದಾರ, ಚಂದ್ರಕಾಂತ ಕಣಜಗಿ, ಕಾಶಿನಾಥ ರೋಡೆ ಎಂಬುವವರನ್ನು ಬಂಧಿಸಿ 15,100 ರೂ.ನಗದು, 52 ಇಸ್ಪೀಟ್ ಎಲೆಗಳನ್ನು ಜಪ್ತಿ ಮಾಡಿದ್ದಾರೆ. ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಪ್ರಪಂಚ ಪಾರಮಾರ್ಥಕ್ಕೆ ಮಹತ್ವ ನೀಡಿದ ಡಾ.ಅಪ್ಪ

• **ಉದಯವಾಹಿನಿ, ಕಲಬುರಗಿ,:**

ಪೂಜ್ಯ ಡಾ. ಶರಣಬಸವಪ್ಪ ಅಪ್ಪ ಅವರ ಜೀವನ ಚಿಂತನೆಗಳಲ್ಲಿ ಪ್ರಪಂಚ ಮತ್ತು ಪಾರಮಾರ್ಥವನ್ನು ಸಮನ್ವಯಗೊಳಿಸುವ ತತ್ವ ಅತ್ಯಂತ ಮಹತ್ವದ್ದಾಗಿದೆ ಎಂದು ಶರಣಬಸವ ವಿವಿಯ ಆಂಗ್ಲ ವಿಭಾಗದ ಪ್ರಾಧ್ಯಾಪಕ ಡಾ.ಎನ್.ಎಸ್.ಪಾಟೀಲ್ ಹೇಳಿದರು. ಅಖಿಲ ಭಾರತ ಶಿವಾನುಭವ ಮಂಟಪದಲ್ಲಿ ಶ್ರಾವಣಮಾಸದ 40 ದಿನಗಳ ಉಪನ್ಯಾಸ ಮಾಲಿಕೆಯಲ್ಲಿ ರವಿವಾರ ಪೂಜ್ಯ ಡಾ.ಶರಣಬಸವಪ್ಪ ಅಪ್ಪ ಅವರ ಪ್ರಪಂಚ ಪಾರಮಾರ್ಥ ಸಿದ್ಧಿ ವಿಷಯ ಕುರಿತು ಮಾತನಾಡಿ, ಪೂಜ್ಯ ಅಪ್ಪ ಅವರು ಲೌಕಿಕ ಜೀವನದಲ್ಲಿ ಕರ್ತವ್ಯ ನಿಷ್ಠೆಯಿಂದ ಬದುಕುತ್ತಾ, ಆಧ್ಯಾತ್ಮಿಕ ಮೌಲ್ಯಗಳನ್ನು ಅಳವಡಿಸಿಕೊಂಡಾಗ ನಿಜವಾದ ಜೀವನ ಸಿದ್ಧಿಯಾಗುತ್ತದೆ ಎಂಬ ಸಂದೇಶವನ್ನು ಅವರು ಸಾರಿದರು.

ಪ್ರಪಂಚ ಎಂದರೆ ಮನುಷ್ಯನ ದೈನಂದಿನ ಲೌಕಿಕ ಜೀವನ. ಪಾರಮಾರ್ಥ ಎಂದರೆ ಆಧ್ಯಾತ್ಮಿಕ ಉನ್ನತಿ ಮತ್ತು ಆತ್ಮಸಾಕ್ಷಾತ್ಕಾರದ ದಾರಿ. ಸತ್ಯವನ್ನು ಪಾಲಿಸುವುದು. ಪೂಜ್ಯ ಡಾ.ಅಪ್ಪ ಅವರ ಚಿಂತನೆಯ ಮುಖ್ಯ ತತ್ವವೆಂದರೆ ಪ್ರಪಂಚವನ್ನು ತ್ಯಜಿಸಿ ಪಾರಮಾರ್ಥವನ್ನು ಪಡೆಯಲು ಸಾಧ್ಯವಿಲ್ಲ, ಪ್ರಪಂಚದಲ್ಲಿಯೇ ಪಾರಮಾರ್ಥವನ್ನು ಸಾಧಿಸಬೇಕು ಎಂಬುದು. ಸಂಸಾರದಲ್ಲಿದ್ದುಕೊಂಡೇ ಕಾಯಕ ಮಾಡಬೇಕು, ದಾಸೋಹ ಮಾಡಬೇಕು, ಸಮಾಜದ ಸೇವೆ ಮಾಡಬೇಕು ಮತ್ತು ಆತ್ಮೋನ್ನತಿಯ ಕಡೆಗೆ ಸಾಗಬೇಕು. ಇದು ಬಸವಾದಿ ಶರಣರ ಜೀವನ ತತ್ವಗಳಿಗೂ ಹೊಂದಿಕೆಯಾಗುತ್ತದೆ. ಹಸಿದವರಿಗೆ ಅನ್ನ ನೀಡದೆ ಕೇವಲ ದೇವರ ಆರಾಧನೆ ಮಾಡುವುದಕ್ಕಿಂತ, ಹಸಿದವರ ಸೇವೆ ಮಾಡುವುದು ಶ್ರೇಷ್ಠವಾದ ಪಾರಮಾರ್ಥ. ಸಮಾಜದ ಸಮಸ್ಯೆಗಳನ್ನು ಕಡೆಗಣಿಸಿ ಕೇವಲ ವೈಯಕ್ತಿಕ ಮೋಕ್ಷದ ಬಗ್ಗೆ ಯೋಚಿಸುವುದು ಸಂಪೂರ್ಣ ಜೀವನವಲ್ಲ. ಆದ್ದರಿಂದ ಪೂಜ್ಯ ಅಪ್ಪನವರ ದೃಷ್ಟಿಯಲ್ಲಿ ಮಾನವ ಸೇವೆಯೇ ಶಿವ ಸೇವೆ, ಕಾಯಕವೇ ಪೂಜೆ ಮತ್ತು ದಾಸೋಹವೇ ನಿಜವಾದ ಧರ್ಮ.

# ಹಳಿಯಾಳ ಠಾಣೆಯ ಮೂವರು ಪಿಎಸ್ಐಗಳು ಅಮಾನತು

• **ಉದಯವಾಹಿನಿ, ಕಾರವಾರ:**

ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ಪೊಲೀಸ್ ಠಾಣೆಯ ಪಿಎಸ್ಐಗಳ ಪೋಸ್ಟಿಂಗ್ ಹಾಗೂ ಲಂಚದ ವ್ಯವಹಾರಕ್ಕೆ ಸಂಬಂಧಿಸಿದಂತೆ ಆಡಿಯೊ ವೈರಲ್ ಆದ ಬೆನ್ನಲ್ಲಿಯೇ ಮೂವರು ಪಿಎಸ್ಐಗಳನ್ನು ಅಮಾನತು ಮಾಡಲಾಗಿದೆ.

ಲಂಚದ ಆಡಿಯೊ ಮಾಧ್ಯಮಗಳಲ್ಲಿ ಪ್ರಸಾರವಾಗಿದ್ದರಿಂದ ಎಚ್ಚೆತ್ತಿರುವ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಗಂಭೀರ ಆರೋಪ ಎದುರಿಸುತ್ತಿದ್ದ ಮೂರು ಪಿಎಸ್ ಐಗಳನ್ನು ಅಮಾನತುಗೊಳಿಸಿ ಆದೇಶಿಸಿದ್ದಾರೆ.

ಹಳಿಯಾಳ ಠಾಣೆಯ ಕಾನೂನು ಮತ್ತು ಸುವ್ಯವಸ್ಥೆ ಪಿಎಸ್ಐ ಕಿರಣ್ ಪಾಟೀಲ್, ಕ್ರೈಂ ಪಿಎಸ್ಐ ಕೃಷ್ಣ ಹಾಗೂ ಈ ಹಿಂದೆ ಹಳಿಯಾಳದಲ್ಲಿ ಪಿಎಸ್ಐ ಆಗಿ ಕಾರ್ಯನಿರ್ವಹಿಸಿ ವರ್ಗಾವಣೆಗೊಂಡಿದ್ದ ವಿನೋದ್ ರೆಡ್ಡಿ ಎಂಬುವವರು ಮಾತನಾಡಿದ್ದಾರೆ ಎನ್ನಲಾದ ಆಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು. ಠಾಣೆಯ ಕಾನೂನು ಮತ್ತು ಸುವ್ಯವಸ್ಥೆ ಪಿಎಸ್ಐ ಸ್ಥಾನಕ್ಕಾಗಿ ನಡೆದ ಹಣದ ಭಾರಿ ವ್ಯವಹಾರ, ಸ್ಟೇಷನ್ ಹಪ್ತಾ ಹಾಗೂ ಪೊಲೀಸ್ ಇಲಾಖೆಯಲ್ಲಿ ಮೇಲಾಧಿಕಾರಿಗಳಿಗೆ ಮುಟ್ಟಿಸಬೇಕಾದ 'ಮಂತ್ಲಿ'


ಉದಯವಾಹಿನಿ ಚಿತ್ರ

ಮಾಮೂಲಿ ಬಗ್ಗೆ ಈ ಮೂವರು ಪಿಎಸ್ಐಗಳು ಚರ್ಚೆ ನಡೆಸಿದ್ದರು.

ಈ ಆಡಿಯೋ ಸಂಭಾಷಣೆ ಪೊಲೀಸ್ ಇಲಾಖೆಯಲ್ಲಿ ತೀವ್ರ ಸಂಚಲನ ಮೂಡಿಸಿತ್ತು. ಎಡಿಎಸ್ಪಿ ನೇತೃತ್ವದ ತನಿಖಾ ತಂಡವು ನಡೆಸಿದ ತನಿಖೆಯಲ್ಲಿ ಪಿಎಸ್ಐಗಳ ಅಕ್ರಮ, ಕರ್ತವ್ಯ ಲೋಪ ಮೇಲ್ನೋಟಕ್ಕೆ ಸಾಬೀತಾಗಿದೆ.

ತನಿಖಾ ವರದಿಯ ಆಧಾರದ ಮೇಲೆ ಎಚ್ಚೆತ್ತ ಉತ್ತರ ಕನ್ನಡ ಜಿಲ್ಲಾ ಎಸ್‌ಪಿ ದೀಪನ್ ಎಂ.ಎನ್. ಅವರು, ಕರ್ತವ್ಯ ಲೋಪ ಹಾಗೂ ಇಲಾಖೆಗೆ ಕಳಂಕ

> **ಪೊಲೀಸ್ ಇಲಾಖೆಯ ಘನತೆಗೆ ಕುತ್ತು ತಂದಿರುವ ಈ ಆಡಿಯೋ ವೈರಲ್ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕೃಷ್ಣಮೂರ್ತಿ ಅವರ ನೇತೃತ್ವದಲ್ಲಿ ಸಮಗ್ರ ತನಿಖೆಗೆ ಆದೇಶಿಸಿದ್ದರು.**

ತಂದ ಹಿನ್ನೆಲೆಯಲ್ಲಿ ಹಳಿಯಾಳ ಪಿಎಸ್ಐ ಕಿರಣ್ ಪಾಟೀಲ್, ಕ್ರೈಂ ಪಿಎಸ್ಐ ಕೃಷ್ಣ ಹಾಗೂ ವಿನೋದ್ ರೆಡ್ಡಿ ಅವರನ್ನು ಅಮಾನತು ಮಾಡಿ ಆದೇಶ ಹೊರಡಿಸಿದ್ದಾರೆ.

# ಅರಿತು ಬಾಳುವುದರಲ್ಲಿ ಸುಖ ಶಾಂತಿಯಿದೆ : ರಂಭಾಪುರಿ ಜಗದ್ಗುರುಗಳು

## ಜೀವನದಲ್ಲಿ ಮನುಷ್ಯ ಧರ್ಮ ನೀತಿ ದಕ್ಷತೆ ಮತ್ತು ಒಳ್ಳೆಯ ಮಾತು ಅಳವಡಿಸಿಕೊಂಡರೆ ಶ್ರೇಯಸ್ಸು ಕಟ್ಟಿಟ್ಟ ಬುತ್ತಿ


• **ಉದಯವಾಹಿನಿ, ಬಾಳೆಹೊನ್ನೂರು:**

ಮನುಷ್ಯ ಜೀವನ ಪವಿತ್ರ, ಪಾವನ. ಒಳ್ಳೆಯವರ ನೆರಳಿನಲ್ಲಿ ಬಾಳಿದರೆ ಜೀವನ ವಿಕಾಸಗೊಳ್ಳುವುದು. ಅರಿತು ಬಾಳುವುದರಲ್ಲಿ ಜೀವನದ ಉತ್ಕರ್ಷತೆ ಮತ್ತು ಶ್ರೇಯಸ್ಸಿದೆ. ಸುಖ ಶಾಂತಿ ಬದುಕಿಗೆ ಧರ್ಮವೇ ಮೂಲವೆಂದು ಶ್ರೀ ರಂಭಾಪುರಿ ಡಾ.

**1 : ಗುರಿಯಿಲ್ಲದ ಗುರಿ ಸಾಧಿಸದ ಬದುಕು ನಿರರ್ಥಕ**
**2 : ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆ**
**3 : ಒಮ್ಮೆ ಕಳೆದರೆ ಮತ್ತೆಂದೂ ತಿರುಗಿ ಬರಲಾರವು**

ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು. ಅವರು ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಶ್ರಾವಣ ಪೂಜಾ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಜೀವನದಲ್ಲಿ ಮನುಷ್ಯ ಧರ್ಮ ನೀತಿ ದಕ್ಷತೆ ಮತ್ತು ಒಳ್ಳೆಯ ಮಾತು ಅಳವಡಿಸಿಕೊಂಡರೆ ಶ್ರೇಯಸ್ಸು ಕಟ್ಟಿಟ್ಟ ಬುತ್ತಿ. ಆತ್ಮ ಸಾಕ್ಷಿ, ಉತ್ತಮ ಆರೋಗ್ಯ ಹಾಗೂ ಸ್ವಾತಂತ್ರ್ಯ ಇವು ಮೂರು ಸಂತೋಷದ ಮೂಲಗಳು. ಪ್ರಾಣ ಯೌವನ ಕಾಲ ಒಮ್ಮೆ ಕಳೆದರೆ ಮತ್ತೆಂದೂ ತಿರುಗಿ ಬರಲಾರವು.

ಗೌರವ ಸ್ವೀಕರಿಸಿದ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆ ಸಚಿವ ಡಾ|| ವಿಜಯಾನಂದ ಕಾಶಪ್ಪನವರ ಮಾತನಾಡಿ


ಉದಯವಾಹಿನಿ ಚಿತ್ರ

ತಂದೆ ತಾಯಿ ಮತ್ತು ಗುರುಗಳ ಮಾರ್ಗದರ್ಶನದಲ್ಲಿ ಯೋಗ್ಯ ಸಂಸ್ಕಾರ ಪಡೆದರೆ ಭವಿಷ್ಯ ಉಜ್ವಲಗೊಳ್ಳುವುದರಲ್ಲಿ ಅನುಮಾನವಿಲ್ಲ. ಲಿಂ. ಎಸ್.ಆರ್.ಕಾಶಪ್ಪನವರ ಅವರಲ್ಲಿ ರಾಜಕೀಯ ಇಚ್ಛಾಶಕ್ತಿ ಇತ್ತು. ಧರ್ಮದಲ್ಲಿ ಇಟ್ಟ ನಂಬಿಕೆ ಬಹಳ ದೊಡ್ಡದಾಗಿತ್ತು. ಅದೇ ದಾರಿಯಲ್ಲಿ ನಡೆಯುತ್ತಿರುವುದು ನನಗೆ ಸಂತೃಪ್ತಿ ಸಮಾಧಾನ ತಂದಿದೆ. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಯಾವಾಗಲೂ ನಮ್ಮ ಮನೆತನದ ಮೇಲಿದೆ. ಇಂದಿನ ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳ ಆಶೀರ್ವಾದದಿಂದ ನಾನಿಂದು ಮಂತ್ರಿಯಾಗಿ ಜನಸೇವೆ ಮಾಡುವ ಸೌಭಾಗ್ಯ ಒದಗಿ ಬಂದಿದೆ. ರಾಜ್ಯದ ಜನರ ಹಿತ ರಕ್ಷಣೆ ಮತ್ತು

> **ಗುರಿಯಿಲ್ಲದ ಗುರಿ ಸಾಧಿಸದ ಬದುಕು ನಿರರ್ಥಕ. ಸದ್ವಿದ್ಯೆ ಉತ್ತಮ ಸಂಬಂಧ ಆದರ್ಶ ಸ್ನೇಹ ಯಾವಾಗಲೂ ನಮ್ಮೊಂದಿಗೆ ಇದ್ದರೆ ಬಾಳೆಲ್ಲ ಸುಖಮಯವಾಗುವುದೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಧರ್ಮ ಸೂತ್ರದಲ್ಲಿ ನಿರೂಪಿಸಿದ್ದಾರೆ. -ರಂಭಾಪುರಿ**

ಅಭಿವೃದ್ಧಿ ಕಾರ್ಯ ಕೈಕೊಂಡು ಅಭಿವೃದ್ಧಿ ಪಥದತ್ತ ಹೆಜ್ಜೆ ಹಾಕಲಾಗುವುದೆಂದ ಅವರು ವೀರಶೈವ ಲಿಂಗಾಯತ ಸಮುದಾಯ ಇನ್ನುಳಿದ ಎಲ್ಲಾ ಸಮುದಾಯದ ಜನರನ್ನು ಸಮಾನತೆ ಸಾಮರಸ್ಯ

> **ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆ ಸಚಿವ ಡಾ|| ವಿಜಯಾನಂದ ಕಾಶಪ್ಪನವರ ಅತ್ಯಂತ ಭಕ್ತಿ ಶ್ರದ್ಧೆಯಿಂದ ಶ್ರಾವಣ ಮಹಾಪೂಜೆಯಲ್ಲಿ ಸಂಪೂರ್ಣ ಪಾಲ್ಗೊಂಡಿರುವುದು ಅವರಲ್ಲಿರುವ ಧರ್ಮ ನಿಷ್ಠೆಗೆ ಸಾಕ್ಷಿಯಾಗಿದೆ ಎಂದು ಹರುಷ ವ್ಯಕ್ತಪಡಿಸಿ ರೇಶ್ಮೆ ಮಡಿ ಫಲ ಪುಷ್ಪ ಸ್ಮರಣಿಕೆ ಗ್ರಂಥವಿತ್ತು ಶುಭ ಹಾರೈಸಿದರು.**

ದತ್ತ ಕರೆತರುವ ಜವಾಬ್ದಾರಿ ಇದೆ.

ಶ್ರೀ ರಂಭಾಪುರಿ ಪೀಠದ ಅಭಿವೃದ್ಧಿ ಪರವಾದ ಕಾರ್ಯಗಳಿಗೆ ಸ್ಪಂದಿಸಿ ಕಾರ್ಯ ಮಾಡುತ್ತೇನೆಂದು ಆದಿ ಜಗದ್ಗುರು ರೇಣುಕಾಚಾರ್ಯರ ಸಾಕ್ಷಿಯಾಗಿ ಹೇಳುವೆ ಎಂದರು.

ಸಚಿವರ ತಾಯಿ ಮಾಜಿ ಶಾಸಕಿ ಶ್ರೀಮತಿ ಗೌರಮ್ಮ ಕಾಶಪ್ಪನವರು, ಪತ್ನಿ ಶ್ರೀಮತಿ ವೀಣಾ ಕಾಶಪ್ಪನವರ ಕಾಂಗ್ರೆಸ್ ಯುವ ಧುರೀಣ ಸೋಮು ಗಣಾಚಾರಿ, ಅ.ಭಾ.ವೀ.ಮಹಾಸಭಾ ಜಿಲ್ಲಾಧ್ಯಕ್ಷ ಹೆಚ್.ಎಂ.ಲೋಕೇಶ, ಬೆಂಗಳೂರು ಮಾಜಿ ಮಹಾಪೌರ ಪುಟ್ಟರಾಜು, ಯುವ ಘಟಕದ ರಾಜ್ಯಾಧ್ಯಕ್ಷ ಮನೋಹರ, ಎಂ.ಕೊಟ್ರೇಶಪ್ಪ, ವಿರೂಪಾಕ್ಷಪ್ಪ ಮಲ್ಲಜ್ಜರ ಮೊದಲಾದ ಗಣ್ಯರು ಪಾಲ್ಗೊಂಡು ಗುರುರಕ್ಷೆ ಸ್ವೀಕರಿಸಿದರು.

ಸಮಾರಂಭಕ್ಕೂ ಮುನ್ನ ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಬಂದ ಭಕ್ತರಿಗೆ ಶುಭ ಹಾರೈಸಿದರು. ಸಮಾರಂಭದ ನಂತರ ಅನ್ನ ದಾಸೋಹ ನೆರವೇರಿತು.